# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2741
ಮಾನ್ಯ ವಿಧಾನ ಪರಿಷತ್ತು ಸದಸ್ಯರ ಹೆಸರು : ಶ್ರೀ ಐವನ್ ಡಿಸೋಜಾ (ನಾಮನಿರ್ದೇಶನ ಹೊಂದಿದವರು)
ಉತ್ತರಿಸಬೇಕಾದ ದಿನಾಂಕ : 12.06.2017
ಉತ್ತರಿಸುವವರು : ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತು ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಕಳೆದ 5 ವರ್ಷಗಳಲ್ಲಿ ವಿಪತ್ತುಗಳಿಂದಾಗಿ ಎಷ್ಟು ಮಕ್ಕಳು ಅಂಗವಿಕಲರಾಗಿದ್ದಾರೆ: ವಿಪತ್ತುಗಳನ್ನು ತಪ್ಪಿಸಲು ಇಲಾಖೆ ಕೈಗೊಂಡ ಕ್ರಮಗಳೇನು: ಪೌಷ್ಠಿಕ ಆಹಾರದ ಕೊರತೆಯಿಂದ ಬಳಲುತ್ತಿರುವ ಮಕ್ಕಳ ಸಂಖ್ಯೆ ಎಷ್ಟು: ಇಲಾಖೆ ಕೈಗೊಂಡ ಕ್ರಮಗಳೇನು: | ಕಳೆದ 5 ವರ್ಷಗಳಲ್ಲಿ ವಿಪತ್ತುಗಳಿಂದ ವಿಕಲಚೇತನರಾದ ಮಕ್ಕಳ ವಿವರಗಳು ಲಭ್ಯವಿರುವುದಿಲ್ಲ.<br>ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಿಂದ, ಶೇ 40ಕ್ಕಿಂತ ಹೆಚ್ಚಿನ ಅಂಗವಿಕಲತೆಯನ್ನು ಹೊಂದಿರುವವರಿಗೆ ಆರ್ಥಿಕ, ಶೈಕ್ಷಣಿಕ, ಸಾಮಾಜಿಕ ಪುನರ್ವಸತಿ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. |
| ಆ | ಪೌಷ್ಠಿಕ ಆಹಾರದ ಕೊರತೆಯನ್ನು ನೀಗಿಸಲು ಇಲಾಖೆ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು) | ರಾಜ್ಯದಲ್ಲಿ ಅಪೌಷ್ಠಿಕತೆಯಿಂದ ಬಳಲುತ್ತಿರುವ ಮಕ್ಕಳ ಸಂಖ್ಯೆ:256716<br><br>(ತೀವ್ರ ಅಪೌಷ್ಠಿಕ ಮಕ್ಕಳು-6110 ಹಾಗೂ ಸಾಧಾರಣ ಅಪೌಷ್ಠಿಕ ಮಕ್ಕಳು-250606)<br><br>ಅಪೌಷ್ಠಿಕತೆಯನ್ನು ಹೋಗಲಾಡಿಸಲು ಇಲಾಖೆಯು ತೆಗೆದುಕೊಂಡಿರುವ ಕ್ರಮಗಳು ಈ ಕೆಳಗಿನಂತಿದೆ.<br><br>ಅಂಗನವಾಡಿ ಕೇಂದ್ರಗಳಲ್ಲಿ ಗರ್ಭಿಣಿ/ ಬಾಣಂತಿಯರಿಗೆ ಮಾತೃಪೂರ್ಣ ಯೋಜನೆಯಡಿ ಪ್ರತಿ ಫಲಾನುಭವಿಗೆ ರೂ.21/-ರ ಘಟಕ ವೆಚ್ಚದಲ್ಲಿ ಮಧ್ಯಾಹ್ನದ ಬಿಸಿಯೂಟವನ್ನು ನೀಡಲಾಗುತ್ತಿದ್ದು, ಇದರಲ್ಲಿ, ಅನ್ನ, ಸಾಂಬಾರ್, ಪಲ್ಯ, ಮೊಟ್ಟೆ, ಹಾಲು, ಶೇಂಗಾಚಿಕ್ಕಿ ಒಳಗೊಂಡಿರುತ್ತದೆ. ಪ್ರಸ್ತುತ ಕೋವಿಡ್- ಪದಾರ್ಥಗಳನ್ನು ಫಲಾನುಭವಿಗಳ ಮನೆಗೆ ನೀಡಲಾಗುತ್ತಿದೆ.<br><br>❖ ಎಲ್ಲಾ ಮಕ್ಕಳಿಗೆ ಅಂಗನವಾಡಿ ಕೇಂದ್ರದಲ್ಲಿ ಪ್ರತಿ ದಿನ ರೂ.8.00 ಮೌಲ್ಯದ ಪೂರಕ ಪೌಷ್ಟಿಕ ಆಹಾರವನ್ನು ನೀಡಲಾಗುತ್ತಿದೆ.<br>❖ ತೀವ್ರ ಅಪೌಷ್ಠಿಕ ಮಕ್ಕಳಿಗೆ ಪ್ರತಿ ದಿನ ರೂ.12.00 ಮೌಲ್ಯದ ಪೂರಕ ಪೌಷ್ಠಿಕ ಆಹಾರವನ್ನು ನೀಡಲಾಗುತ್ತಿದೆ.<br>❖ ಅಂಗನವಾಡಿಗೆ ಹಾಜರಾಗುವ 3 ವರ್ಷದಿಂದ 6 ವರ್ಷದ ಎಲ್ಲಾ ಮಕ್ಕಳಿಗೆ ವಾರದಲ್ಲಿ 2 ದಿನ ಮೊಟ್ಟೆಯನ್ನು ನೀಡಲಾಗುತ್ತಿದೆ.<br>❖ ರಾಜ್ಯ ಸರ್ಕಾರದ ಕ್ಷೀರಭಾಗ್ಯ ಯೋಜನೆಯಡಿ 6 ತಿಂಗಳಿಂದ 6 ವರ್ಷದ ಎಲ್ಲಾ ಅಂಗನವಾಡಿ ಮಕ್ಕಳಿಗೆ ವಾರದಲ್ಲಿ 5 ದಿನ 150 ಮಿ.ಲಿ ಹಾಲನ್ನು (15ಗ್ರಾಂ ಕೆನೆಭರಿತ ಹಾಲಿನಪುಡಿ, 10ಗ್ರಾಂ ಸಕ್ಕರೆ) ನೀಡಲಾಗುತ್ತಿದೆ.<br><br>❖ 6 ತಿಂಗಳಿಂದ 3 ವರ್ಷದ ತೀವ್ರ ಅಪೌಷ್ಠಿಕ ಮಕ್ಕಳಿಗೆ ಮತ್ತು 5 ಹಿಂದುಳಿದ ಜಿಲ್ಲೆಗಳಾದ ಬೀದರ್, ಕಲಬುರಗಿ, ರಾಯಚೂರು, ಯಾದಗಿರಿ ಮತ್ತು ಕೊಪ್ಪಳ ಇಲ್ಲಿಯ ಸಾಧಾರಣ ಅಪೌಷ್ಠಿಕ |

| | | |
|---|---|---|
| | | ಮಕ್ಕಳಿಗೆ ವಾರದಲ್ಲಿ 3 ದಿನ ಮೊಟ್ಟೆ ಹಾಗೂ 3 ದಿನ 200 ಎಂ.ಎಲ್ ಹಾಲನ್ನು, ಮೊಟ್ಟೆ ಸ್ವೀಕರಿಸದಿರುವ ಮಕ್ಕಳಿಗೆ ವಾರದಲ್ಲಿ 6 ದಿನ ಹಾಲನ್ನು ನೀಡಲಾಗುತ್ತಿದೆ.<br><br>❖ 3 ವರ್ಷದಿಂದ 6 ವರ್ಷದ ತೀವ್ರ ಅಪೌಷ್ಠಿಕ ಮಕ್ಕಳಿಗೆ ಮತ್ತು 5 ಹಿಂದುಳಿದ ಜಿಲ್ಲೆಗಳಾದ ಬೀದರ್, ಕಲಬುರಗಿ, ರಾಯಚೂರು, ಯಾದಗಿರಿ ಮತ್ತು ಕೊಪ್ಪಳ ಇಲ್ಲಿಯ ಸಾಧಾರಣ ಅಪೌಷ್ಠಿಕ ಮಕ್ಕಳಿಗೆ ವಾರದಲ್ಲಿ 5 ದಿನ ಮೊಟ್ಟೆ ಹಾಗೂ 3 ದಿನ 200 ಎಂ.ಎಲ್ ಹಾಲನ್ನು, ಮೊಟ್ಟೆ ಸ್ವೀಕರಿಸದಿರುವ ಮಕ್ಕಳಿಗೆ ವಾರದಲ್ಲಿ 6 ದಿನ ಹಾಲನ್ನು ನೀಡಲಾಗುತ್ತಿದೆ.<br>❖ ತೀವ್ರ ಅಪೌಷ್ಠಿಕ ಮಕ್ಕಳಿಗೆ ಆರೋಗ್ಯ ಇಲಾಖೆಯ ಪೌಷ್ಠಿಕ ಪುನರ್ವಸತಿ ಕೇಂದ್ರ (NRC) ಗಳಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.<br>❖ ಆರೋಗ್ಯ ಮತ್ತು ಪೌಷ್ಠಿಕ ಶಿಬಿರಗಳನ್ನು ಏರ್ಪಡಿಸಿ ಅಧಿಕ ಪೌಷ್ಠಿಕತೆಯುಳ್ಳ ಆಹಾರಗಳನ್ನು ತಯಾರಿಸುವ ಕುರಿತು ಮತ್ತು ಮಕ್ಕಳಿಗೆ ಪೌಷ್ಠಿಕತೆಯುಳ್ಳ ಆಹಾರವನ್ನು ನೀಡಲು ತಿಳುವಳಿಕೆ ನೀಡಲಾಗುತ್ತಿದೆ.<br>❖ ಪ್ರತಿ ತಿಂಗಳು ನಡೆಸುವ ತಾಯಂದಿರ ಸಭೆಗಳಲ್ಲಿ ಅಪೌಷ್ಠಿಕತೆ ನಿವಾರಣೆ ಬಗ್ಗೆ ತೆಗೆದುಕೊಳ್ಳಬೇಕಾದ ಕ್ರಮಗಳ ಕುರಿತು ತಾಯಂದಿರುಗಳಿಗೆ ತಿಳುವಳಿಕೆ ನೀಡಲಾಗುತ್ತಿದೆ.<br>❖ ಪೋಷಣ್ ಅಭಿಯಾನ ಯೋಜನೆಯಡಿ ಪ್ರತಿ ತಿಂಗಳು 2 ಬಾರಿ ಸಮುದಾಯ ಆಧಾರಿತ ಚಟುವಟಿಕೆಗಳನ್ನು ನಡೆಸಲಾಗುತ್ತಿದ್ದು, ತಾಯಂದಿರಿಗೆ ಅಪೌಷ್ಠಿಕತೆ ಬಗ್ಗೆ ತಿಳಿಸಲಾಗುತ್ತಿದೆ.<br>❖ ಅಂಗನವಾಡಿ ಕೇಂದ್ರಗಳಿಗೆ ಎಲ್ಲಾ ಮಕ್ಕಳ ಆರೋಗ್ಯ ತಪಾಸಣೆಯನ್ನು 3 ತಿಂಗಳಿಗೊಮ್ಮೆ ನಡೆಸಲಾಗುತ್ತಿದೆ.<br>❖ 2022-23ನೇ ಸಾಲಿನಿಂದ ಎಲ್ಲಾ ಸಾಧಾರಣ ಅಪೌಷ್ಠಿಕ ಮಕ್ಕಳಿಗೂ ಸಹ ವಾರದಲ್ಲಿ 3 ದಿನ ಮೊಟ್ಟೆ ಮತ್ತು 3 ದಿನ 200 ಎಂ.ಎಲ್ ಹಾಲನ್ನು ನೀಡಲು ಕ್ರಮ ಕೈಗೊಳ್ಳಲಾಗಿದೆ. |

ಸಂಖ್ಯೆ:ಮಮಇ 144 ಪಿಹೆಚ್‌ಪಿ 2017

Halappa B.A

(ಆಚಾರ ಹಾಲಪ್ಪ ಬಸಪ್ಪ)
ಗಣಿ ಮತ್ತು ಭೂ ವಿಜ್ಞಾನ ಹಾಗೂ ಮಹಿಳಾ ಮತ್ತು
ಮಕ್ಕಳ ಅಭಿವೃದ್ಧಿ ಮತ್ತು ವಿಕಲಚೇತನರ ಹಾಗೂ
ಹಿರಿಯ ನಾಗರಿಕರ ಸಬಲೀಕರಣ ಸಚಿವರು